**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:** ಮಲೆನಾಡು ಪ್ರದೇಶಾಭಿವೃದ್ಧಿ ಮಂಡಳಿ, ಶಿವಮೊಗ್ಗಕ್ಕೆ 2015-16ನೇ ಸಾಲಿನ ನಾಲ್ಕನೇ ಕಂತಿನ ಅನುದಾನ ಬಿಡುಗಡೆ ಮಾಡುವ ಬಗ್ಗೆ.

**ಓದಲಾಗಿದೆ:**
1. ಸರ್ಕಾರಿ ಆದೇಶ ಸಂಖ್ಯೆ:ಯೋಇ 17 ಮಪ್ರಮಂ 2015, ದಿನಾಂಕ:27.04.2015
2. ಸರ್ಕಾರಿ ಆದೇಶ ಸಂಖ್ಯೆ:ಯೋಇ 17 ಮಪ್ರಮಂ 2015, ದಿನಾಂಕ:24.09.2015
3. ಸರ್ಕಾರಿ ಆದೇಶ ಸಂಖ್ಯೆ:ಯೋಇ 17 ಮಪ್ರಮಂ 2015, ದಿನಾಂಕ:23.12.2015
4. ಕಾರ್ಯದರ್ಶಿ, ಮಲೆನಾಡು ಪ್ರದೇಶಾಭಿವೃದ್ಧಿ ಮಂಡಳಿ, ಇವರ ಪತ್ರ ಸಂಖ್ಯೆ:ಮಪ್ರಅಮಂ:ನಗದು:ಅನುದಾನ:2015-16/2150, ದಿನಾಂಕ:04.03.2016

**ಪ್ರಸ್ತಾವನೆ:**

ಮಲೆನಾಡು ಪ್ರದೇಶಾಭಿವೃದ್ಧಿ ಮಂಡಳಿಗೆ 2015-16ನೇ ಸಾಲಿನ ಆಯವ್ಯಯದಲ್ಲಿ ಒಟ್ಟು ರೂ.4000.00 ಲಕ್ಷಗಳನ್ನು ಒದಗಿಸಲಾಗಿದ್ದು, ಮೇಲೆ ಓದಲಾದ (1), (2) ಮತ್ತು (3)ರ ಸರ್ಕಾರಿ ಆದೇಶಗಳಲ್ಲಿ ಮಂಡಳಿಗೆ 2015-16ನೇ ಸಾಲಿನಲ್ಲಿ ಪ್ರಥಮ, ದ್ವಿತೀಯ ಮತ್ತು ತೃತೀಯ ಕಂತುಗಳಾಗಿ ತಲಾ ರೂ.1000.00 ಲಕ್ಷಗಳಂತೆ ಒಟ್ಟು ರೂ.3000.00 ಲಕ್ಷಗಳನ್ನು ಈ ಕೆಳಕಂಡ ಲೆಕ್ಕಶೀರ್ಷಿಕೆಗಳಡಿ ಬಿಡುಗಡೆ ಮಾಡಲಾಗಿದೆ.

(ರೂ. ಲಕ್ಷಗಳಲ್ಲಿ)

| ಕ್ರ.ಸಂ. | ಲೆಕ್ಕಶೀರ್ಷಿಕೆ | ಒದಗಿಸಿರುವ ಅನುದಾನ | ಬಿಡುಗಡೆ ಮಾಡಿರುವ ಒಟ್ಟು ಅನುದಾನ |
|---|---|---|---|
| 1 | 2515-00-103-0-02-101 (ಸಹಾಯಾನುದಾನ) | 127.00 | 95.25 |
| 2 | 2515-00-103-0-02-132 (ಬಂಡವಾಳ ವೆಚ್ಚ) | 2909.00 | 2181.75 |
| 3 | 2515-00-103-0-02-422(ವಿಶೇಷ ಘಟಕ ಯೋಜನೆ) | 686.00 | 514.50 |
| 4 | 2515-00-103-0-02-423 (ಗಿರಿಜನ ಉಪಯೋಜನೆ) | 278.00 | 208.50 |
| | **ಒಟ್ಟು** | **4000.00** | **3000.00** |

ಮೇಲೆ ಓದಲಾದ ಕ್ರಮಸಂಖ್ಯೆ(4)ರ ಪತ್ರದಲ್ಲಿ ಕಾರ್ಯದರ್ಶಿ, ಮಲೆನಾಡು ಪ್ರದೇಶಾಭಿವೃದ್ಧಿ ಮಂಡಳಿ, ಶಿವಮೊಗ್ಗ, ಇವರು ಮಂಡಳಿಯಲ್ಲಿ ಲಭ್ಯವಿದ್ದ ಅನುದಾನದ ಶೇಕಡ 82.16 ರಷ್ಟು ವೆಚ್ಚವಾಗಿದ್ದು, ಮಂಡಳಿಯ ಕ್ರಿಯಾ ಯೋಜನೆ ಕಾಮಗಾರಿಗಳ ಬಿಲ್‌ಗಳನ್ನು ಇತ್ಯರ್ಥಪಡಿಸಲು ಮತ್ತು ಆಡಳಿತ ವೆಚ್ಚ ಭರಿಸಲು 2015-16ನೇ ಸಾಲಿನ ನಾಲ್ಕನೇ ಕಂತಿನ ಅನುದಾನವನ್ನು ಬಿಡುಗಡೆ ಮಾಡುವಂತೆ ಕೋರಿರುತ್ತಾರೆ. ಪ್ರಸ್ತಾವನೆಯನ್ನು ಪರಿಶೀಲಿಸಿದ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ:ಯೋಇ 17 ಮಪ್ರಮಂ 2015, ಬೆಂಗಳೂರು, ದಿನಾಂಕ:11.03.2016**

ಮಲೆನಾಡು ಪ್ರದೇಶಾಭಿವೃದ್ಧಿ ಮಂಡಳಿ, ಶಿವಮೊಗ್ಗಕ್ಕೆ 2015-16ನೇ ಸಾಲಿನ ನಾಲ್ಕನೇ ಕಂತಿನ ಅನುದಾನವಾಗಿ ರೂ.1000.00 ಲಕ್ಷ (ಹತ್ತು ಕೋಟಿ ರೂಪಾಯಿಗಳು ಮಾತ್ರ)ಗಳನ್ನು ಈ ಕೆಳಕಂಡ ಲೆಕ್ಕಶೀರ್ಷಿಕೆಗಳಡಿ ಬಿಡುಗಡೆ ಮಾಡಿದೆ.

| ಕ್ರಮ ಸಂಖ್ಯೆ | ಲೆಕ್ಕಶೀರ್ಷಿಕೆ | ಮೊತ್ತ (ರೂ. ಲಕ್ಷಗಳಲ್ಲಿ) |
|---|---|---|
| 1 | 2515-00-103-0-02-101 (ಸಹಾಯಾನುದಾನ) | 31.75 |
| 2 | 2515-00-103-0-02-132 (ಬಂಡವಾಳ ವೆಚ್ಚ) | 727.25 |
| 3 | 2515-00-103-0-02-422 (ವಿಶೇಷ ಘಟಕ ಯೋಜನೆ) | 171.50 |
| 4 | 2515-00-103-0-02-423 (ಗಿರಿಜನ ಉಪಯೋಜನೆ) | 69.50 |
| | **ಒಟ್ಟು** | **1000.00** |

ಬಿಡುಗಡೆಯಾದ ಈ ಅನುದಾನವನ್ನು ಮಲೆನಾಡು ಪ್ರದೇಶಾಭಿವೃದ್ಧಿ ಮಂಡಳಿಯ ಕಾರ್ಯದರ್ಶಿಯವರ ಬ್ಯಾಂಕ್ ವೈಯಕ್ತಿಕ ಖಾತೆಗೆ ಜಮೆ ಮಾಡಿ, ನಂತರ ಅವಶ್ಯಕತೆಗನುಗುಣವಾಗಿ ಖರ್ಚು ಮಾಡತಕ್ಕದ್ದು ಮತ್ತು ನಿಯಮಾನುಸಾರ ಹಣ ಬಳಕೆ ಪ್ರಮಾಣಪತ್ರವನ್ನು ಸರ್ಕಾರಕ್ಕೆ ಸಲ್ಲಿಸುವುದು.

ಕಾಮಗಾರಿಗಳ ಆರ್ಥಿಕ ಮತ್ತು ಭೌತಿಕ ಪ್ರಗತಿಯ ವಿವರಗಳನ್ನು ತಪ್ಪದೇ MPIC ಸಭೆಯಲ್ಲಿ ಹಾಜರುಪಡಿಸತಕ್ಕದ್ದು.

ಈ ಅನುದಾನವನ್ನು 2015-16ನೇ ಸಾಲಿನ ಕ್ರಿಯಾ ಯೋಜನೆಯಲ್ಲಿನ ಕಾಮಗಾರಿಗಳ ಅನುಷ್ಠಾನಕ್ಕೆ ಮಾತ್ರ ಉಪಯೋಗಿಸತಕ್ಕದ್ದು.

ಈ ಆದೇಶವನ್ನು ಸರ್ಕಾರಿ ಆದೇಶ ಸಂಖ್ಯೆ:ಆಇ 01 ಟಿಎಫ್‌ಪಿ 2016, ದಿನಾಂಕ:19.01.2016ರಲ್ಲಿ ಆಡಳಿತ ಇಲಾಖೆಯ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿರುವ ವಿತ್ತಾಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

**(ರಫೀ ಅಹಮದ್.ಎಂ.ಎಸ್.)**
ಸರ್ಕಾರದ ಅಧೀನ ಕಾರ್ಯದರ್ಶಿ-1&2,
ಯೋಜನೆ, ಕಾರ್ಯಕ್ರಮ ಸಂಯೋಜನೆ
ಮತ್ತು ಸಾಂಖ್ಯಿಕ ಇಲಾಖೆ.

**ಇವರಿಗೆ:**

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ.
3. ಸರ್ಕಾರದ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ.
4. ಕಾರ್ಯದರ್ಶಿ, ಮಲೆನಾಡು ಪ್ರದೇಶಾಭಿವೃದ್ಧಿ ಮಂಡಳಿ, ಶಿವಮೊಗ್ಗ.
5. ಅಧ್ಯಕ್ಷರು, ಕನ್ನಡ ಅಭಿವೃದ್ಧಿ ಪ್ರಾಧಿಕಾರ, ವಿಧಾನಸೌಧ, ಬೆಂಗಳೂರು.
6. ನಿರ್ದೇಶಕರು, ಎಡಿಬಿ ವಿಭಾಗ, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ.
7. ಜಂಟಿ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
8. ಜಿಲ್ಲಾ ಖಜಾನಾಧಿಕಾರಿಗಳು, ಶಿವಮೊಗ್ಗ ಜಿಲ್ಲೆ, ಶಿವಮೊಗ್ಗ.
9. ಶಾಖಾಧಿಕಾರಿ, ಸ್ಥಿಮರ ಶಾಖೆ, ಯೋಜನಾ ಇಲಾಖೆ(ಕಾಂಪೆಂಡಿಯಮ್‌ಗೋಸ್ಕರ).
10. ವಾರದ ರಾಜ್ಯ ಪತ್ರ.
11. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

***